# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 180
ಸದಸ್ಯರ ಹೆಸರು : ಶ್ರೀಮತಿ ಭಾರತಿ ಶೆಟ್ಟಿ
ಉತ್ತರಿಸುವ ದಿನಾಂಕ : 28.01.2026
ಉತ್ತರಿಸುವ ಸಚಿವರು : ಕಂದಾಯ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೆಂಗಳೂರು ಹಾಗೂ ಹೊಂದಿಕೊಂಡಿರುವ ಜಿಲ್ಲೆಗಳಲ್ಲಿ ಎಷ್ಟು ಪ್ರಮಾಣದಲ್ಲಿ ಸರ್ಕಾರಿ ಭೂಮಿ ಒತ್ತುವರಿಯಾಗಿದೆ; ಇದನ್ನು ಯಾವ ರೀತಿ ಗುರುತಿಸಲಾಗಿದೆ;</td><td>ಬೆಂಗಳೂರು ಹಾಗೂ ಹೊಂದಿಕೊಂಡಿರುವ ಜಿಲ್ಲೆಗಳಲ್ಲಿ ಒತ್ತುವರಿಯಾಗಿರುವ ಸರ್ಕಾರಿ ಭೂಮಿಯ ವಿವರ ಈ ಕೆಳಕಂಡಂತೆ ಇದೆ.
<table>
<tr><th>ಜಿಲ್ಲೆ</th><th>ಒತ್ತುವರಿ ಗುರುತಿಸಿರುವುದು (ಎಕರೆ/ಗುಂಟೆ)</th></tr>
<tr><td>ಬೆಂಗಳೂರು ನಗರ</td><td>34420</td></tr>
<tr><td>ಬೆಂಗಳೂರು ಗ್ರಾಮಾಂತರ</td><td>36229</td></tr>
<tr><td>ಬೆಂಗಳೂರು ದಕ್ಷಿಣ ಜಿಲ್ಲೆ</td><td>38066</td></tr>
<tr><td>ಕೋಲಾರ</td><td>47208</td></tr>
<tr><td>ಒಟ್ಟು</td><td>1,55,923</td></tr>
</table></td></tr>
<tr><td>ಆ)</td><td>ಇದನ್ನು ಸರ್ಕಾರದ ಸುಪರ್ದಿಗೆ ಪಡೆಯಲು ನಿಗದಿತ ಕಾಲಮಿತಿಯಲ್ಲಿ ಕಾರ್ಯಾಚರಣೆ ಮಾಡಲು ಯಾವ ರೀತಿಯ ಯೋಜನೆ ರೂಪಿಸಿದೆ;</td><td rowspan="2">ಸರ್ಕಾರಿ ಭೂಮಿ ಒತ್ತುವರಿ ನಡೆದಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ಕಲಂ 39 ರಂತೆ ಜಿಲ್ಲಾಧಿಕಾರಿಯವರಿಗೆ ಹಾಗೂ ಕಲಂ 104 ತಹಶೀಲ್ದಾರರಿಗೆ ನಿಯಾಮನುಸಾರ ಒತ್ತುವರಿ ತೆರವುಗೊಳಿಸಲು/ಆದೇಶ ಹೊರಡಿಸಲು ಅಧಿಕಾರವಿರುತ್ತದೆ. ಕರ್ನಾಟಕ ಭೂ ಕಬಳಿಕೆ ನಿಷೇಧ ಕಾಯ್ದೆ 2011 ರಡಿಯಲ್ಲಿ ಸ್ಥಾಪಿತವಾದ ಭೂಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಲ್ಲಿ ಸರ್ಕಾರಿ ಜಮೀನು ಒತ್ತುವರಿ ಮಾಡಿದವರ ವಿರುದ್ಧ ಪ್ರಕರಣ ದಾಖಲಿಸಲಾಗುತ್ತಿದೆ.<br>1. ಭೂಮಿ ತಂತ್ರಾಂಶದಲ್ಲಿ ಯಾವುದೇ ಆರ್.ಟಿ.ಸಿ ಯನ್ನು ಸರ್ಕಾರದ ಹೆಸರಿನಿಂದ ಖಾಸಗಿ ವ್ಯಕ್ತಿಯ ಹೆಸರಿಗೆ ಬದಲಾವಣೆ ಮಾಡುವ ಮೊದಲು ತಹಶೀಲ್ದಾರರ ಅನುಮೋದನೆ ಕಡ್ಡಾಯವಾಗಿರುತ್ತದೆ.<br>2. ಯಾವುದೇ ಹೊಸ ಸರ್ವೆ ನಂಬರ್ ಸೃಜಿಸಲು ಅಥವಾ ಸರ್ವೆ ನಂಬರ್ ತೆಗೆದು ಹಾಕಲು (ಡಿಲೀಷನ್) ಮಾಡಲು ಭೂಮಿ ತಂತ್ರಾಂಶದಲ್ಲಿ ಜಿಲ್ಲಾಧಿಕಾರಿಗಳು ಅಥವಾ ಉಪವಿಭಾಗಾಧಿಕಾರಿಯವರ ಆದೇಶದೊಂದಿಗೆ ಕ್ರಮವಹಿಸಲು ಅವಕಾಶವನ್ನು ನೀಡಲಾಗಿದೆ.<br>3. ಯಾವುದೇ ಭೂ ಮಂಜೂರಾತಿ ಸಂದರ್ಭದಲ್ಲಿ ನಮೂನೆ 1 ರಿಂದ 5 ತುಂಬಲು ಇದ್ದ Manual ಪದ್ಧತಿಯನ್ನು ತೆಗೆದುಹಾಕಿದ್ದು ತಂತ್ರಾಂಶದ</td></tr>
<tr><td>ಇ)</td><td>ಈ ರೀತಿಯ ಒತ್ತುವರಿದಾರರ ವಿರುದ್ಧ ಸರ್ಕಾರ ಕೈಗೊಳ್ಳದಿರುವುದರಿಂದ ಒತ್ತುವರಿಯು ಮುಂದುವರಿಯುತ್ತಲೇ ಇರುವುದನ್ನು ತಡೆಗಟ್ಟಲು ಸರ್ಕಾರದ ಕ್ರಮಗಳೇನು?</td></tr>
</table>

| | | |
|---|---|---|
| | | ಮೂಲಕ ಭರ್ತಿ ಮಾಡಲು ಅವಕಾಶ ಮಾಡಲಾಗಿದೆ<br>4. ಕಾವೇರಿ ಹಾಗೂ ಭೂಮಿ ತಂತ್ರಾಂಶ ಜೋಡಣೆಯಾಗಿರುವುದರಿಂದ ಯಾವುದೇ ಸರ್ಕಾರಿ ಭೂಮಿಯನ್ನು ಅನಧಿಕೃತವಾಗಿ ಮಾರಾಟ ಮಾಡಲು ಹಾಗೂ ಖರೀದಿಸಲು ಅವಕಾಶವಿರುವುದಿಲ್ಲ.<br>5. ಯಾವುದೇ ಸರ್ಕಾರಿ ಭೂಮಿ ಮೇಲೆ ಅನಧಿಕೃತವಾಗಿ ಮಾಡಿರುವ ಖಾತೆ ಬದಲಾವಣೆಯ ಸಂಬಂಧ ಕರ್ನಾಟಕ ಭೂಕಂದಾಯ ಕಾಯ್ದೆ1964ರನ್ವಯ ಜಿಲ್ಲಾಧಿಕಾರಿಗಳು ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿ ವಿಚಾರಣೆಗೆ ಅವಕಾಶವಿರುತ್ತದೆ.<br>6. ಸರ್ಕಾರಿ ಜಮೀನುಗಳಿಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಇಂಡೆಕ್ಸಿಂಗ್ ಅಂಡ್ ಕ್ಯಾಟಲಾಗಿಂಗ್ ಮತ್ತು ಸ್ಕ್ಯಾನಿಂಗ್ ಮಾಡಲಾಗುತ್ತಿದೆ.<br>7. ಭೂಮಿ ತಂತ್ರಾಂಶದಲ್ಲಿ ಎಲ್ಲಾ ಸರ್ಕಾರಿ ಜಮೀನುಗಳನ್ನು ಫ್ಲಾಗ್ ಮಾಡಲಾಗುತ್ತಿದೆ. ಇದರಿಂದ ಸರ್ಕಾರಿ ಜಮೀನುಗಳ ಅನಧಿಕೃತ ವಹಿವಾಟು ಮಾಡಲು ಹಾಗೂ ಅನಧಿಕೃತ ಋಣಭಾರಗಳನ್ನು ಸೃಷ್ಟಿಸಲು ಅವಕಾಶವಿರುವುದಿಲ್ಲ.<br>8. ಒತ್ತುವರಿಯಿಂದ ತೆರವುಗೊಳಿಸಲಾದ ಸರ್ಕಾರಿ ಜಮೀನುಗಳಿಗೆ ಕಂದಕ, ತಂತಿಬೇಲಿ ಹಾಕಿ ಮತ್ತು ನಾಮಫಲಕ ಅಳವಡಿಸಿ ಸಂರಕ್ಷಿಸಲು ಕ್ರಮ ವಹಿಸಲಾಗುತ್ತಿದೆ.<br>9. ಖೋಟಾ ದಾಖಲೆಗಳು ಸೃಷ್ಟಿಯಾಗಿರುವಂತಹ ಪ್ರಕರಣಗಳಲ್ಲಿ ದಾಖಲೆಗಳ ನೈಜತೆ ಪರಿಶೀಲನೆಗಾಗಿ Forensic Lab ಗಳಿಗೆ (ವರ್ಷಗಳ ಅಂತರ ಗೊತ್ತಾಗುತ್ತದೆ) ಕಳುಹಿಸಲು ಕ್ರಮ ವಹಿಸಲಾಗುತ್ತಿದೆ.<br>10. ಸರ್ಕಾರವು LAND BEAT APP ನ್ನು ಜಾರಿಗೆ ತಂದಿದ್ದು ಆಪ್ ಮೂಲಕ ಸ್ಥಳೀಯ ಗ್ರಾಮಾಡಳಿತ ಅಧಿಕಾರಿಗಳು (VAO) ಸರ್ಕಾರಿ ಜಮೀನಿಗೆ ಬೇಟಿ ನೀಡಿ ಒತ್ತುವರಿ ವಿಸ್ತೀರ್ಣವನ್ನು ಸದರಿ APP ನಲ್ಲಿ ದಾಖಲಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಆರ್‌ಡಿ 15 ಎಲ್‌ಜಿಕ್ಯೂ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು